ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 02–02–2019

# ಪತ್ರಿಕಾ ಆಮಂತ್ರಣ

1. Prize Distribution, for Karnataka and Goa NCC for winning Prime Minister Banner and Trophy
   Cultural Evening and Dinner.

   Guest:
   Brigadier D.M. Poorvee Mutt,
   DDG, Karnataka and Goa NCC Directorate

   Dated: 03-02-2019 Sunday Time : 6.30 -8.30P.M.

   Venue : Christ College , Bengaluru.
   Contact : Major Regir Raj Abraham,
   Mobile No. 7086492123

2. Kidwai Cancer Institute on occation World Cancer Day
   One Day Workshop
   Sub:- The role of NSS Volunteers and Social Workers in Cancer prevention.

   Date: 04-02-2019 Monday, Time : 9-00 AM

   Venue: Kidwai Cancer Institute, Dr M.H. Marigowda Road, Bengaluru.

3. ಪತ್ರಿಕಾಗೋಷ್ಠಿ:

ರಾಷ್ಟ್ರಮಟ್ಟದ ವಿಚಾರ ಸಂಕಿರಣ "ದ್ರವ್ಯಗುಣ ಪ್ರಬೋಧಿನಿ –2019" ಕುರಿತಂತೆ:

ಡಾ ಎಸ್. ಆಹಲ್ಯಾ,
ಪ್ರಾಚಾರ್ಯರು,
ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ.

ದಿನಾಂಕ: 04–02–2019, ಸೋಮವಾರ ಸಮಯ: ಬೆಳಿಗ್ಗೆ 10–30 ಗಂಟೆಗೆ
ಸ್ಥಳ: ಸಭಾಂಗಣ (ಮೂರನೇ ಮಹಡಿ) ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯ,
ಧನ್ವಂತರಿ ರಸ್ತೆ, ಬೆಂಗಳೂರು–9

4. Felicitation Ceremony by Honorable Governor for Karnataka and Goa NCC for winning Prime Minister Banner and Trophy and Tea

**Felicitation:**
Shri. Vajubhai Vala,
Hon'ble Governor of Karnataka
Dated: 04-02-2019 Monday Time : 1.00 - 2.00 P.M.
Venue : Raj Bhavan , Bengaluru.
Contact : Major Regir Raj Abraham,
Mobile No. 7086492123

**ಪತ್ರಿಕಾ ಪ್ರಕಟಣೆ**

## ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

ಬೆಂಗಳೂರು, ಫೆಬ್ರವರಿ 2 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 03–02–2019** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಶ್ರೀಮತಿ ಭವ್ಯ ಮಂಜುನಾಥ್ ರವರಿಂದ ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಗ್ಗೆ 8.30 ರಿಂದ 9.00 ಗಂಟೆಯವರೆಗೆ **ಸೆಂಟರ್ ಫಾರ್ ಸೋಷಿಯಲ್ ಆಕ್ಷನ್, ಕ್ರಿಸ್ಟ್ ಯೂನಿವರ್ಸಿಟಿ, ಹೊಸೂರು ರಸ್ತೆ, ಬೆಂಗಳೂರು ಸಂಸ್ಥೆಯ ವಿದ್ಯಾರ್ಥಿಗಳಿಂದ ಸಾಮಾಜಿಕ ನ್ಯಾಯದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಸಲುವಾಗಿ ಬೀದಿ ನಾಟಕ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

# ಪರೀಕ್ಷೆ ಮುಂದೂಡಿಕೆ

ಬೆಂಗಳೂರು, ಫೆಬ್ರವರಿ 2 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ಇಲಾಖೆಯ ಅಲ್ಪಸಂಖ್ಯಾತ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿನ ಮುಖ್ಯೋಪಾಧ್ಯಾಯರು ಹಾಗೂ ವಿವಿಧ ವಿಷಯಗಳ ಶಿಕ್ಷಕರ ಉಳಿಕೆ

ಮೂಲ ವೃಂದದ 554 ಹುದ್ದೆಗಳ ನೇಮಕಾತಿಯ ಸಂಬಂಧ ಸ್ಪರ್ಧಾತ್ಮಕ ಪರೀಕ್ಷೆಯನ್ನು 2019 ನೇ ಸಾಲಿನ ಫೆಬ್ರವರಿ 03, 09 ಮತ್ತು 10ನೇ ತಾರೀಖುಗಳಂದು ನಡೆಸಲಾಗುವುದು ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿತ್ತು.

ಆದರೆ ಸದರಿ ದಿನಾಂಕಗಳಂದು ಬೇರೆ ಬೇರೆ ಪರೀಕ್ಷೆಗಳಿರುವುದರಿಂದ ಸದರಿ ಪರೀಕ್ಷಾ ದಿನಾಂಕಗಳನ್ನು ಮುಂದೂಡಲಾಗಿದ್ದು, ಬದಲಾದ ದಿನಾಂಕ/ವೇಳಾಪಟ್ಟಿಯನ್ನು ನಂತರದಲ್ಲಿ ತಿಳಿಸಲಾಗುವುದೆಂದು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

## ಕಾರ್ಮಿಕರ ಸಮ್ಮಾನ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಫೆಬ್ರವರಿ 2 (ಕರ್ನಾಟಕ ವಾರ್ತೆ)

2018-19 ನೇ ಸಾಲಿನ ಆಯವ್ಯಯದಲ್ಲಿ "ಅಸಂಘಟಿತ ಕಾರ್ಮಿಕರನ್ನು ಕೇಂದ್ರವಾಗಿಟ್ಟುಕೊಂಡು ಮಾರ್ಚ್ 1 ರಂದು ಜಿಲ್ಲಾ ಹಾಗೂ ರಾಜ್ಯಮಟ್ಟದಲ್ಲಿ ಕಾರ್ಮಿಕ ಸಮ್ಮಾನ ದಿನ ಆಚರಣೆ ಮಾಡಲು ಹಾಗೂ ಅಸಂಘಟಿತ ವಲಯದಲ್ಲಿ ವಿಶೇಷ ಸಾಧನೆಮಾಡಿದ ಕಾರ್ಮಿಕರಿಗೆ ಕಾರ್ಮಿಕರ ಸಮ್ಮಾನ ಪ್ರಶಸ್ತಿ ನೀಡುವುದಾಗಿ" ಘೋಷಿಸಿರುವ ಹಿನ್ನೆಲೆಯಲ್ಲಿ ಅಸಂಘಟಿತ ವಲಯದ ಅರ್ಹ ಕಾರ್ಮಿಕರನ್ನು ಆಯ್ಕೆಮಾಡಿ ಮಾರ್ಚ್ 1 ರಂದು "ಕಾರ್ಮಿಕರ ಸಮ್ಮಾನ ದಿನ" ಆಚರಣೆ ಮಾಡಲು ಹಾಗೂ ಅಸಂಘಟಿತ ವಲಯದಲ್ಲಿ ವಿಶೇಷ ಸಾಧನೆ ಮಾಡಿದ ಕಾರ್ಮಿಕರಿಗೆ ಕಾರ್ಮಿಕರ ಸಮ್ಮಾನ ಪ್ರಶಸ್ತಿ ನೀಡುವ ಯೋಜನೆಯನ್ನು ಜಾರಿಗೊಳಿಸುವ ಕುರಿತು ಸರ್ಕಾರ ಸೆಪ್ಟೆಂಬರ್ 24, 2018 ರಂದು ಆದೇಶ ಹೊರಡಿಸಿರುತ್ತದೆ.

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ನೋಂದಾಯಿಸಿಕೊಂಡ ಅಸಂಘಟಿತ ವಲಯಗಳಾದ ಕ್ಷೌರಿಕರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಮಂಡಕ್ಕಿ ಭಟ್ಟಿ ಕಾರ್ಮಿಕರು, ಹಮಾಲಿಗಳು, ಚಿಂದಿ ಆಯುವವರು, ಗೃಹ ಕೆಲಸಗಾರರು, ದರ್ಜಿಗಳು, ಮೆಕ್ಯಾನಿಕ್‌ಗಳು, ಅಗಸರು, ಕಟ್ಟಡ ಕಾರ್ಮಿಕರು, ಖಾಸಗಿ ವಾಣಿಜ್ಯ ವಹನ ಚಾಲಕರು ಇವರುಗಳಿಗೆ ಶ್ರಮ

ಸಮ್ಮಾನ ಹಾಗೂ ವಿಶೇಷ ಪುರಸ್ಕಾರವನ್ನು ನೀಡಲು ಯೋಜನೆಯನ್ನು ರೂಪಿಸಲಾಗಿದ್ದು, ಅಸಂಘಟಿತ ವಲಯದ ಅರ್ಹ ಕಾರ್ಮಿಕರಿಂದ ಅರ್ಜಿ ಆಹ್ವಾನಿಸಿದ್ದು, ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ ಕಾರ್ಮಿಕ ಭವನದಲ್ಲಿನ ಕಾರ್ಮಿಕ ಅಧಿಕಾರಿಗಳ ಕಚೇರಿಯಲ್ಲಿ ಅರ್ಜಿ ಪಡೆದು ದಿನಾಂಕ: 10-02-2019 ರೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್ www.labour.kar.nic.in ನ್ನು ಹಾಗೂ ಇಲಾಖೆಯ ದೂರವಾಣಿ ಸಂಖ್ಯೆಗಳು: 080 –26086236, 26086269, 26086270, 26086221, 26086107, 26086310 ಅನ್ನು ಸಂಪರ್ಕಿಸಬಹುದಾಗಿದೆ.